**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.536/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಆದರ್ಶ್ ಬಿ.ಜಿ | ಪ್ರಾಸಾ-2 |
| ತಂದೆಯ ಹೆಸರು | : ಗೋಪಾಲ್ | ಚಾಸಾ-3 |
| ವಯಸ್ಸು | : 30 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ರೈಟರ್ | ದಿನಾಂಕಃ 21.05.2025 |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನನಗೆ ಆರೋಪಿಯ ಪರಿಚಯ ಇರುವುದಿಲ್ಲ. ಚಾಸಾ-1, 2 ಮತ್ತು 4 ರವರ ಪರಿಚಯ ನನಗಿಲ್ಲ. ಆರೋಪಿಯು ಗೈರು ಹಾಜರಿದ್ದು ಅವರ ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ.

ಕಳೆದ 1 ವರ್ಷದ ಹಿಂದೆ ನನ್ನ ಆಸ್ತಿಯ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಬಣಕಲ್ ಠಾಣೆಗೆ ಹೋಗಿದ್ದಾಗ ಪೋಲಿಸರು ಒಂದು ಖಾಲಿ ಹಾಳೆಯ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಪೋಲಿಸರು ಯಾವ ವಿಚಾರದ ಕುರಿತು ಸಹಿಯನ್ನು ಪಡೆದುಕೊಂ ಡಿರುತ್ತಾರೆ ಎಂದು ತಿಳಿಸಿರುವುದಿಲ್ಲ ಮುತ್ತ ನಾನು ಅವರನ್ನು ಕೇಳಿ ತಿಳಿದುಕೊಂಡಿರುವುದಿಲ್ಲ. ಇದನ್ನು ಹೊರತು ಪಡಿಸಿ ಇನ್ಯಾವುದೇ ವಿಚಾರ ನನಗೆ ತಿಳಿದಿರುವುದಿಲ್ಲ ಮತ್ತು ಪೋಲಿಸರು ನನ್ನಿಂದ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಾನು ಬಾನಳ್ಳಿಯಲ್ಲಿ ದಿನಸಿ ಅಂಗಡಿಯನ್ನು ಇಟ್ಟುಕೊಂಡಿರುತ್ತೇನೆ ಎಂದರೆ ಸರಿ. ಚಾಸಾ-2 ರವರ ತೋಟದ ಕೂಲಿ ಲೈನ್ ನಲ್ಲಿ ಆರೋಪಿಯು ವಾಸವಾಗಿರುತ್ತಾರೆ ಅವರು ಪರಿಚಯ ನನಗೆ ಇದೆ ಎಂದರೆ ಸರಿಯಲ್ಲ. ದಿ.19.02.2024 ರಂದು ಆರೋಪಿಯು ಒಂದು ಚಿನ್ನದ ಸರವನ್ನು ತಂದು ಕೊಟ್ಟಿದು ಅದನ್ನು ನನ್ನ ಹೆಸರಿನಲ್ಲಿ ಅದನ್ನು ಮೂಡಿಗೆರೆ ಟೌನ್ ನಲ್ಲಿರುವ ನವರತ್ನ ಫೈನಾನ್ಸ್ ನಲ್ಲಿ ಅಡವಿಟ್ಟು, ಆರೋಪಿಗೆ 51,000/- ಹಣವನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಚಿನ್ನದ ಸರವನ್ನು ಆರೋಪಿಯು ಚಾಸಾ-1 ರವರ ಮನೆಯಿಂದ ಕಳುವು ಮಾಡಿರುತ್ತಾರೆ, ಆ ವಿಷಯ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಇದನ್ನು ಕುರಿತು ಚಾಸಾ-1 ರವರು ಬಣಕಲ್ ಠಾಣೆಯಲ್ಲಿ ಒಂದು ದೂರನ್ನು ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ದಿ.27.02.2024 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ

ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ಚಾಸಾ-1 ರವರು ರಾಜಿ ಮಾಡಿಕೊಂಡಿರುತ್ತಾರೆ ಎಂದರೆ ನನಗೆ ತಿಳಿದಿರುವುದಿಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.